# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 470 (1327)

ಸದಸ್ಯರ ಹೆಸರು : ಶ್ರೀ ಕಿಶೋರ್ ಕುಮಾರ್ ಪುತ್ತೂರು (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)

ಉತ್ತರಿಸುವ ಸಚಿವರು : ಗಣಿ ಮತ್ತು ಭೂವಿಜ್ಞಾನ ಹಾಗೂ ತೋಟಗಾರಿಕೆ ಸಚಿವರು

ಉತ್ತರಿಸಬೇಕಾದ ದಿನಾಂಕ : 22.08.2025

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | 2024-25ನೇ ಸಾಲಿನಲ್ಲಿ ದಕ್ಷಿಣ ಕನ್ನಡ ಮತ್ತು ಉಡುಪಿ ಜಿಲ್ಲೆಗಳಲ್ಲಿ ಬೆಳೆ ಸಮೀಕ್ಷೆ ಮಾಡದ ರೈತರಿಗೆ ಈ ವರ್ಷ ಹವಾಮಾನ ಆಧಾರಿತ ಬೆಳೆ ವಿಮೆ ಪರಿಹಾರಕ್ಕೆ ನೋಂದಣಿ ಮಾಡಿ ಪ್ರೀಮಿಯಂ ಹಣ ಪಾವತಿಸಲು ಅವಕಾಶ ಇಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಸರ್ಕಾರದ ಗಮನಕ್ಕೆ ಬಂದಿರುವುದಿಲ್ಲ.<br><br>ಬೆಳೆ ವಿಮೆ ನೋಂದಣಿ ಸಮಯದಲ್ಲಿ ಬೆಳೆ ಸಮೀಕ್ಷೆ ಪ್ರಕಾರ ರೈತರು ಬೆಳೆದ ಬೆಳೆಗಳ ಮಾಹಿತಿಯನ್ನು ಪರಿಶೀಲಿಸಲಾಗುತ್ತಿದೆ. ಪ್ರಸ್ತುತ ವರ್ಷದಲ್ಲಿ (2025-26) ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಅಧಿಸೂಚಿತ ಬಹುವಾರ್ಷಿಕ ಬೆಳೆಗಳಾದ ಅಡಿಕೆ ಮತ್ತು ಕರಿ ಮೆಣಸು ಬೆಳೆಗಳನ್ನು ನೋಂದಣಿ ಮಾಡುವಾಗ ಹಿಂದಿನ ವರ್ಷಗಳಾದ ಮುಂಗಾರು 2023ರ ಮತ್ತು ಮುಂಗಾರು 2024ರ ಬೆಳೆ ಸಮೀಕ್ಷೆ ದತ್ತಾಂಶವನ್ನು ಪರಿಗಣಿಸಲಾಗಿದೆ. ಈ ಎರಡೂ ವರ್ಷಗಳಲ್ಲಿ ಯಾವುದಾದರೂ ಒಂದು ವರ್ಷದಲ್ಲಿ ಬೆಳೆ ಬೆಳೆದಿದ್ದರೂ ಸಹ ರೈತರು ಪ್ರೀಮಿಯಂ ಪಾವತಿಸಲು ಅವಕಾಶ ಕಲ್ಪಿಸಲಾಗಿದೆ. |
| ಆ) | ಪ್ರಸಕ್ತ ಸಾಲಿನಲ್ಲಿ ನೋಂದಣಿ ಮಾಡಿ ಪ್ರೀಮಿಯಂ ಕಟ್ಟಲು ಅವಕಾಶ ಇಲ್ಲದೆ ಕರಾವಳಿ ಜಿಲ್ಲೆಗಳ ಸಾವಿರಾರು ರೈತರು ಯೋಜನೆ ಸೌಲಭ್ಯ ಪಡೆಯಲು ವಂಚಿತರಾಗಿರುವುದರಿಂದ ಸಮಸ್ಯೆ ಪರಿಹಾರಕ್ಕೆ ಸರ್ಕಾರ ಏನು ಕ್ರಮವಹಿಸುವುದು; | ಮರುವಿನ್ಯಾಸಗೊಳಿಸಲಾದ ಹವಾಮಾನ ಆಧಾರಿತ ಬೆಳೆ ವಿಮೆ ಯೋಜನೆಯ ಸೌಲಭ್ಯವನ್ನು ರೈತರಿಗೆ ಕಲ್ಪಿಸಲು ಈ ಕೆಳಕಾಣಿಸಿದ ಕ್ರಮ ಕೈಗೊಳ್ಳಲಾಗಿದೆ:<br><br>ಪ್ರತಿ ವರ್ಷ ಕೃಷಿ ಇಲಾಖೆ ಉಸ್ತುವಾರಿಯಲ್ಲಿ, ಜಿಲ್ಲಾ ಮತ್ತು ತಾಲ್ಲೂಕು ಆಡಳಿತದ ಮೇಲುಸ್ತುವಾರಿಗೆ ಸಂಬಂಧಪಟ್ಟ ಇಲಾಖೆಗಳ ಸಹಭಾಗಿತ್ವದಲ್ಲಿ ಬೆಳೆ ಸಮೀಕ್ಷೆ ನಡೆಸಲಾಗುತ್ತಿದೆ. 2023-24ನೇ ಸಾಲಿನಲ್ಲಿ ಕರಾವಳಿ ಜಿಲ್ಲೆಗಳಾದ ಉಡುಪಿ ಜಿಲ್ಲೆಯಲ್ಲಿ ಶೇ. 99 ಮತ್ತು ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಶೇ.95 ರಷ್ಟು ಹಾಗೂ 2024-25ನೇ ಸಾಲಿನಲ್ಲಿ ಉಡುಪಿ ಜಿಲ್ಲೆಯಲ್ಲಿ ಶೇ. 97 ಕ್ಕಿಂತ ಹೆಚ್ಚು ಮತ್ತು ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಶೇ.85 ರಷ್ಟು ಬೆಳೆ ಸಮೀಕ್ಷೆ ನಡೆಸಿದ್ದು, ಅದರಂತೆ ರೈತರು ಬೆಳೆ ಬೆಳೆದಿರುವ ವಿವರಗಳನ್ನೊಳಗೊಂಡ ದತ್ತಾಂಶ ಲಭ್ಯವಿದೆ. ಇದರ ಆಧಾರದ ಮೇರೆಗೆ ನೋಂದಣಿ ಮಾಡಲಾಗುತ್ತಿದೆ. ಈ ಎರಡೂ ವರ್ಷಗಳಲ್ಲಿ ಯಾವುದಾದರೂ ಒಂದು ವರ್ಷದಲ್ಲಿ ಬೆಳೆ ಬೆಳೆದಿದ್ದರೂ ಸಹ ಬೆಳೆ ವಿಮೆ |
| (ಇ) | ಕಳೆದ ವರ್ಷ ಬೆಳೆ ಸಮೀಕ್ಷೆ ಮಾಡದ ರೈತರಿಗೂ 2025-26ನೇ ಸಾಲಿನಲ್ಲಿ ಹವಾಮಾನ ಆಧಾರಿತ ಬೆಳೆ ವಿಮೆಗೆ ಪ್ರೀಮಿಯಂ ಕಟ್ಟಲು ಅವಕಾಶ ಮಾಡಿಕೊಡುವ ಬಗ್ಗೆ ಸರ್ಕಾರದ ಸ್ಪಷ್ಟ ನಿಲುವೇನು: | |

| | | |
|---|---|---|
| | | ಮಾಡಿಸಬಹುದಾಗಿರುವುದರಿಂದ ರೈತರು ಈ ಯೋಜನೆಯ ಸೌಲಭ್ಯವನ್ನು ಪಡೆಯಲು ವಂಚಿತರಾಗುವ ಸಾಧ್ಯತೆಯಿರುವುದಿಲ್ಲ. ಬೆಳೆ ಸಮೀಕ್ಷೆ ಮಾಡದ ರೈತರುಗಳ ಬೆಳೆ ಬೆಳೆದ ಮಾಹಿತಿ ಲಭ್ಯವಿರುವುದಿಲ್ಲ . ಆದುದರಿಂದ ಅಂತಹ ರೈತರುಗಳನ್ನು ಬೆಳೆ ವಿಮೆಗೆ ನೋಂದಾಯಿಸಲು ಮಾರ್ಗಸೂಚಿಯಲ್ಲಿ ಅವಕಾಶವಿರುವುದಿಲ್ಲ. |
| (ಈ) | ಬೆಳೆ ವಿಮೆ ಪ್ರೀಮಿಯಂ ಕಟ್ಟುವ ಅವಧಿಯನ್ನು ಇನ್ನೂ ಒಂದು ತಿಂಗಳು ವಿಸ್ತರಿಸುವ ಬಗ್ಗೆ ಸರ್ಕಾರ ಕ್ರಮ ವಹಿಸುವುದೇ; | ಕ್ರಮ ಕೈಗೊಳ್ಳಲಾಗಿದೆ.<br><br>2025-26ನೇ ಸಾಲಿನ ಮುಂಗಾರು ಹಂಗಾಮಿನಡಿ 31ನೇ ಜುಲೈ,2025ರವರೆಗೆ ರೈತರ ನೋಂದಣಿಗೆ ಅಂತಿಮ ದಿನಾಂಕವಾಗಿದ್ದ ವಿವಿಧ ಜಿಲ್ಲೆಗಳ ಎಲ್ಲಾ ಅಧಿಸೂಚಿತ ಬೆಳೆಗಳಿಗೆ ಸಾಲ ಪಡೆಯದ ರೈತರುಗಳಿಗೆ ದಿನಾಂಕ:14.08.2025 ಮತ್ತು ಸಾಲ ಪಡೆದ ರೈತರು ಗಳಿಗೆ ದಿನಾಂಕ:30.08.2025 ರವರೆಗೆ ವಿಸ್ತರಿಸಿ ಆದೇಶಿಸಲಾಗಿರುತ್ತದೆ. |
| ಉ) | ಕರಾವಳಿ ಜಿಲ್ಲೆಗಳಲ್ಲಿ ಈ ಬಾರಿಯ ವಿಪರೀತ ಮಳೆಯಿಂದಾಗಿ ಅಡಿಕೆಗೆ, ಕಾಳು ಮೆಣಸಿಗೆ, ತೆಂಗು ಹಾಗೂ ಕೋಕೋ ಬೆಳೆಗಳಿಗೆ ವಿಪರೀತ ರೋಗ ಇರುವುದರಿಂದ ಬೆಳೆ ವಿಮೆ ಪ್ರೀಮಿಯಂ ಅವಧಿಯನ್ನು ವಿಸ್ತರಿಸುವುದು ಸೂಕ್ತವಲ್ಲವೇ? | ಅಡಿಕೆ ಮತ್ತು ಕರಿ ಮೆಣಸು ಬೆಳೆಗಳಿಗೆ ಮೇಲಿನಂತೆ ನೋಂದಣಿ ಅವಧಿಯನ್ನು ವಿಸ್ತರಿಸಲಾಗಿದೆ. ತೆಂಗು ಹಾಗೂ ಕೋಕೋ ಬೆಳೆಯು ಹವಾಮಾನ ಆಧಾರಿತ ಬೆಳೆ ವಿಮೆ ಅಡಿ ಸೇರಿರುವುದಿಲ್ಲ. |

ಸಂಖ್ಯೆ: HORTI 440 HGM 2025

**(ಎಸ್. ಎಸ್. ಮಲ್ಲಿಕಾರ್ಜುನ್)**
ಗಣಿ ಮತ್ತು ಭೂ ವಿಜ್ಞಾನ ಹಾಗೂ ತೋಟಗಾರಿಕೆ ಸಚಿವರು